ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಮೊದಲನೇ ಅಧಿವೇಶನ
(2ನೇ ಮುಂದುವರೆದ ಉಪವೇಶನ)

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 6ನೇ ಜುಲೈ, 2018

(ಸಮಯ: ಬೆಳಿಗ್ಗೆ 10.00 ಗಂಟೆಗೆ)

1. ಉಪ ಸಭಾಧ್ಯಕ್ಷರ ಚುನಾವಣೆ

ಅ) **ಶ್ರೀ ಎಂ. ಕೃಷ್ಣಾರೆಡ್ಡಿ ಅವರನ್ನು** ವಿಧಾನ ಸಭೆಯ **"ಉಪ ಸಭಾಧ್ಯಕ್ಷ"**ರನ್ನಾಗಿ ಚುನಾಯಿಸಬೇಕೆಂದು ವಿಧಾನಸಭಾ ಸದಸ್ಯರಾದ **ಶ್ರೀ ಕೆ.ಎಂ. ಶಿವಲಿಂಗೇಗೌಡ** ಅವರು ಸೂಚಿಸುವುದು.

ಆ) ವಿಧಾನಸಭಾ ಸದಸ್ಯರಾದ **ಶ್ರೀ ಕೆ. ಗೋಪಾಲಯ್ಯ** ಅವರು ಅನುಮೋದಿಸುವುದು.

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

I. ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು) ಅವರು:

ಭಾರತ ಸಂವಿಧಾನದ 151(2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 31ನೇ ಮಾರ್ಚ್, 2017ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ಈ ಕೆಳಕಂಡ ವರದಿಗಳನ್ನು ಸಭೆಯ ಮುಂದಿಡುವುದು:

1) ರಾಜ್ಯ ಸರ್ಕಾರದ ಹಣಕಾಸಿನ ವ್ಯವಹಾರಗಳ ಮೇಲಿನ ವರದಿ (2018ನೇ ವರ್ಷದ ವರದಿ ಸಂಖ್ಯೆ–1)
2) ಸಾಮಾನ್ಯ ಮತ್ತು ಸಾಮಾಜಿಕ ವಲಯದ ಮೇಲಿನ ವರದಿ (2018ನೇ ವರ್ಷದ ವರದಿ ಸಂಖ್ಯೆ–2)

II. ಸದಸ್ಯರಿಗೆ ಈಗಾಗಲೇ ಕಳುಹಿಸಲಾಗಿರುವ ಮೊದಲನೇ ಹಾಗೂ ಎರಡನೇ ಪಟ್ಟಿಯ ರೀತ್ಯಾ.

... 2/ ..

3. ಕಾರ್ಯದರ್ಶಿಯವರ ವರದಿ

ಕಾರ್ಯದರ್ಶಿಯವರು:–

14ನೇ ವಿಧಾನಸಭೆಯ ಅಧೀನ ಶಾಸನ ರಚನಾ ಸಮಿತಿಯ 46ನೇ ವರದಿಯನ್ನು ಸಭೆಯ ಮುಂದೆ ಮಂಡಿಸುವುದು.

4. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ

ಎಸ್. ಮೂರ್ತಿ
ಕಾರ್ಯದರ್ಶಿ

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm